ಸಿಎಂ ವಿರುದ್ಧ ದೂರು

ಬೆಂಗಳೂರು: ನಕಲಿ ಆಡಿಯೊ ತಯಾರಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ಎಸ್.ಯಡಿಯೂರಪ್ಪ ಅವರ ಮೇಲೆ ಸುಳ್ಳು ಆರೋಪ ಮಾಡಿದ್ದಾರೆಂದು ಆರೋಪಿಸಿ ಮುಖ್ಯಮಂತ್ರಿ ಎಚ್. ಡಿ. ಕುಮಾರಸ್ವಾಮಿ ಅವರ ವಿರುದ್ಧ ಬಿಜೆಪಿ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ದೂರು ನೀಡಿದೆ.

ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪ್ರದಾನ ಸಮಾರಂಭ ಇಂದು

ಬೆಂಗಳೂರು: ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ಫೆ. 11 ರಂದು ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಪುಸ್ತಕಗಳ ಲೋಕಾರ್ಪಣೆ ಕಾರ್ಯಕ್ರಮವನ್ನು ವಸಂತ ನಗರದ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ಸಂಜೆ 5.30 ಕ್ಕೆ ಆಯೋಜಿಸಲಾಗಿದೆ. ಪ್ರಶಸ್ತಿ ಪ್ರದಾನವನ್ನು ಮುಖ್ಯಮಂತ್ರಿ ಎಚ್. ಡಿ. ಕುಮಾರಸ್ವಾಮಿ ಮಾಡಲಿದ್ದಾರೆ. ಪುಸ್ತಕ ಲೋಕಾರ್ಪಣೆಯನ್ನು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಮಾಡಲಿದ್ದು, ಪ್ರಶಸ್ತಿ ಪುರಸ್ಕೃತರ ಪರಿಚಯವನ್ನು ಜಲಸಂಪನ್ಮೂಲ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಡಿ.ಕೆ. ಶಿವಕುಮಾರ್ ಮಂಡಿಸಲಿದ್ದಾರೆ ಹಾಗೂ ಅಧ್ಯಕ್ಷತೆಯನ್ನು ವಿಧಾನಸಭಾ ಸದಸ್ಯ ಆರ್. ರೋಷನ್ ಬೇಗ್ ವಹಿಸಲಿದ್ದು, ಲೋಕಸಭಾ ಸದಸ್ಯ ಪಿ.ಸಿ. ಮೋಹನ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ ಪಂಕಜ್‌ಕುಮಾರ್ ಪಾಂಡೆ, ನಿರ್ದೇಶಕ ಎಂ ರವಿಕುಮಾರ್, ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಎಂ. ಸಿದ್ದರಾಜು ಮತ್ತಿತರರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಮನೆ ನಿರ್ಮಿಸಲು ಅನುಮೋದನೆ

ಬೆಂಗಳೂರು: ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ)-ಹೌಸಿಂಗ್ ಫಾರ್ ಆಲ್-2022 ಅಭಿಯಾನದ 'ಅಫೋರ್ಡೇಬಲ್ ಹೌಸಿಂಗ್ ಇನ್ ಪಾರ್ಟ್‌ನರ್‌ಶಿಪ್' ಉಪ ಘಟಕದಡಿ ಅನುಮೋದನೆಗೊಂಡಿರುವ 376 (ಪೌರ ಕಾರ್ಮಿಕರ ಗೃಹಭಾಗ್ಯ ಯೋಜನೆಯಡಿ) ಮನೆ ನಿರ್ಮಿಸುವ 2,976.35 ಲಕ್ಷ ಅಂದಾಜು ಮೊತ್ತದ ಮೂರು ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿದೆ. ಧಾರವಾಡ ಜಿಲ್ಲೆಯಲ್ಲಿ 320, ರಾಮನಗರ ಜಿಲ್ಲೆಯ ಕನಕಪುರದಲ್ಲಿ 43, ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆಯಲ್ಲಿ 13 ಸೇರಿ ಒಟ್ಟು 376 ಮನೆಗಳ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಯಡಿಯೂರಪ್ಪ ಮಾತನಾಡಿದ್ದು ಸತ್ಯ

ಮದ್ದೂರು: ರಾಜ್ಯ ಸರಕಾರ ಸುಭದ್ರವಾಗಿದೆ. ಸ್ವಲ್ಪ ಕಿರಿಕಿರಿ ಇರಬಹುದು. ಅದನ್ನು ಪಕ್ಷಗಳ ವರಿಷ್ಠರು ಸರಿಪಡಿಲಿದ್ದಾರೆ. ಸರಕಾರ ಉತ್ತಮ ರೀತಿಯಲ್ಲಿ ಕೆಲಸ ಮಾಡುತ್ತಿದೆ. ಲೋಕಸಭಾ ಚುನಾವಣೆಗೆ ಪಕ್ಷದ ಅಭ್ಯರ್ಥಿಯನ್ನು ಪಕ್ಷದ ವರಿಷ್ಠರು ತೀರ್ಮಾನ ಮಾಡುತ್ತಾರೆ. ಅದಕ್ಕೆ ನಾನು ಬದ್ಧನಾಗಿದ್ದೇನೆ ಎಂದು ಶಾಸಕ ಕೆ.ಸುರೇಶ್ ಗೌಡ ತಿಳಿಸಿದರು.

ಅಧಿಕಾರಕ್ಕಾಗಿ ತಲೆ ಒಡೆವ ಸರಕಾರ ನಿಮಗೆ ಬೇಕಾ?

← ಮೊದಲಪುಟದಿಂದ

ಸಾಲ ಮನ್ನಾ ಸುಳ್ಳಿನ ಕಂತೆ: ಇದೇ ವೇಳೆ ರಾಜ್ಯದ ಮೈತ್ರಿ ಸರಕಾರ ಹಾಗೂ ಎಚ್.ಡಿ. ಕುಮಾರಸ್ವಾಮಿಯವರ ಮೇಲೆಯೂ ಮೋದಿ ನೇರವಾಗಿ ವಾಗ್ದಾಳಿ ನಡೆಸಿದರು. ಚುನಾವಣೆಗೆ ಮುನ್ನ ಕುಮಾರಸ್ವಾಮಿಯವರು ಘೋಷಿಸಿದ ಸಾಲ ಮನ್ನಾ ಯೋಜನೆ ಏನಾಯಿತು. 43 ಲಕ್ಷ ರೈತರ ಸಾಲ ಮನ್ನಾ ಮಾಡುವುದಾಗಿ ಹೇಳಿದ್ದು ಸಿಎಂ ಕುಮಾರಸ್ವಾಮಿ ಈವರೆಗೆ ತೀರಿಸಿದ್ದು ಕೇವಲ 60 ಸಾವಿರ ರೈತರ ಸಾಲ ಮಾತ್ರ. ಇದೇ ಇವರ ಅಸಲಿಯತ್ತು. ಈ ಜನ ದಶಕಗಳಿಂದ ಜನಸಾಮಾನ್ಯರ ಭಾವನೆಯೊಂದಿಗೆ ಆಟವಾಡುತ್ತಾ ಬಂದಿದ್ದಾರೆ. ಮತಕ್ಕಾಗಿ ಯಾವ ಸುಳ್ಳು ಬೇಕಾದರೂ ಹೇಳುತ್ತಾರೆ. ಇವರ ಸಾಲ ಮನ್ನಾ ಯೋಜನೆ ಪಕ್ಕಾ ಸುಳ್ಳು. ಯೋಜನೆ ದಡ ಮುಟ್ಟುವುದೇ ಇಲ್ಲ. ಸಾಲ ಮನ್ನಾ ಯೋಜನೆಯ ಶೇ. 20ರಿಂದ 30 ರಷ್ಟು ಈ ಕಳ್ಳಕಾಕರ ಪಾಲಾಗಲಿದೆ ಎಂದರು.

ಕೇಂದ್ರ ಸರಕಾರ 12 ಕೋಟಿ ರು. ರೈತರಿಗೆ ನೆರವಾಗುವ ಯೋಜನೆ ಜಾರಿಗೆ ತಂದಿದ್ದೇವೆ. ಶೇ. 90ರಷ್ಟಾದರೂ ರೈತರು ಯೋಜನೆ ಲಾಭ ಪಡೆಯಲಿದ್ದಾರೆ. ಕರ್ನಾಟಕದ ಸಾಲ ಮನ್ನಾ ಯೋಜನೆಯೊಂದಿಗೆ ಇದನ್ನು ತುಲನೆ ಮಾಡಿದ್ದೇ ಆದಲ್ಲಿ, 10 ವರ್ಷದಲ್ಲಿ ರಾಜ್ಯ ಸರಕಾರ 60 ಕೋಟಿ ರು. ರೈತರಿಗೆ ಸಾಲ ಮನ್ನಾ ಯೋಜನೆಯ ಲಾಭ ಮುಟ್ಟಿಸಿದರೆ, ಕೇಂದ್ರ ಸರಕಾರ 10 ವರ್ಷದಲ್ಲಿ 7.5 ಲಕ್ಷ ಕೋಟಿ ರು. ರೈತರ ಖಾತೆಗೆ ಜಮೆ ಮಾಡಲಿದೆ. ಇದು ಕೇಂದ್ರ ಸರಕಾರದ ರೈತರ ಪರ ಕಾಳಜಿ. ಇಲ್ಲಿನ ಕಾಂಗ್ರೆಸ್-ಜೆಡಿಎಸ್ ಸರಕಾರಕ್ಕೆ ರೈತರ ಬಗ್ಗೆ ಕಾಳಜಿಯಿಲ್ಲ, ಯುವಕರ ಬಗ್ಗೆ ಕಾಳಜಿಯಿಲ್ಲ, ಬದಲಾಗಿ ಸ್ವಾರ್ಥವೇ ಇವರಿಗೆ ಮುಖ್ಯವೆಂದರು.

ರಾಜ್ಯದಲ್ಲಿ ಸಿಡಿಲಿನ ಅಬ್ಬರ ಶುರು, ಹುಷಾರು!

ಬಾಲಕೃಷ್ಣ ಎನ್. ಬೆಂಗಳೂರು

ರಾಜ್ಯದಲ್ಲಿ ಹವಾಮಾನ ವೈಪರೀತ್ಯದಿಂದಾಗಿ ಎರಡು ದಿನ ಸಿಡಿಲು, ಗುಡುಗು ಸಹಿತ ಮಳೆಯಾಗುವ ಸೂಚನೆ ಇದೆ. ಸುರಿವ ಮಳೆಯ ಜತೆ ಸಿಡಲು ಆರ್ಭಟಿಸಲಿದ್ದು, ಜೀವವನ್ನೇ ಬಲಿ ತೆಗೆದುಕೊಳ್ಳುವ ಸಾಧ್ಯತೆ ಇದೆ.

ಮಂಗಳೂರಿನ ಕುಕ್ಕೆ ಸುಬ್ರಹ್ಮಣ್ಯ ಹಾಗೂ ಸುತ್ತಲಿನ ಪ್ರದೇಶದಲ್ಲಿ ಗುರುವಾರ ಭಾರೀ ಮಳೆಯಾಗಿದ್ದು, ಸಿಡಿಲಿನ ಹೊಡೆತಕ್ಕೆ ಒಬ್ಬ ಮೃತಪಟ್ಟಿದ್ದಾನೆ. ಈಗಾಗಲೇ ಮರಣ ಮೃದಂಗಕ್ಕೆ ಸಿಡಿಲು ಶುರುವಾಗಿದ್ದು, ಎಷ್ಟೋ ಜೀವಗಳನ್ನು ಬಲಿ ಪಡೆಯಲು ಯಮನಂತೆ ವರ್ತಿಸಲಿದೆ. ಹೀಗಾಗಿ ಜನ ನಿರ್ಲಕ್ಷ್ಯ ತೋರದೆ ಸಿಡಿಲಿನಿಂದ ತಪ್ಪಿಸಿಕೊಳ್ಳಬೇಕಾಗಿದೆ. ಮಂಗಳೂರು, ರಾಮನಗರ, ಚಾಮರಾಜನಗರ, ಕೋಲಾರ, ಬೆಂಗಳೂರು ಸೇರಿದಂತೆ ದಕ್ಷಿಣ ಒಳನಾಡಿನ ಪ್ರದೇಶಗಳಲ್ಲಿ ಸಿಡಿಲಿನ ಆರ್ಭಟ ಜೋರಾಗಲಿದೆ.

ಪ್ರತಿ ವರ್ಷ ರಾಜ್ಯದಲ್ಲಿ ಗುಡುಗು, ಸಿಡಿಲಿನ ದಾಳಿಗೆ ಕನಿಷ್ಠ 70ರಿಂದ 80 ಮಂದಿ ಸಾಯುತ್ತಿದ್ದಾರೆ. ಪ್ರತಿ ವರ್ಷ ಭಾರತದಲ್ಲಿ ಸುಮಾರು 1,755 ಮಂದಿ ಸಿಡಿಲಿನಿಂದಾಗಿ ಮರಣ ಹೊಂದುತ್ತಿದ್ದಾರೆ. ಇದು ಪ್ರಾಕೃತಿಕ ವಿಕೋಪಗಳ ಸಂಖ್ಯೆಗಿಂತ ಹೆಚ್ಚು. 1967ರಿಂದ 2012ರ ಅವಧಿಯಲ್ಲಿ, ಪ್ರಾಕೃತಿಕ ವಿಕೋಪದಲ್ಲಿ ಸತ್ತವರ ಸಂಖ್ಯೆಯ ಶೇ.39ರಷ್ಟು ಗುಡುಗು-ಸಿಡಿಲು ಪಾಲಾಗಿದೆ. 2013ರಲ್ಲಿ 2,833 ಮಂದಿ, 2014ರಲ್ಲಿ 2,582 ಮಂದಿ ಸಿಡಿಲಿಗೆ ಬಲಿಯಾಗಿದ್ದಾರೆ. ಹಾಗೆಯೇ 2015 ರಿಂದ 2018 ರವರೆಗೆ ಸುಮಾರು 10 ಸಾವಿರಕ್ಕೂ ಹೆಚ್ಚು ಮಂದಿ ಸಿಡಿಲಿನಿಂದ ಜೀವ ಕಳೆದುಕೊಂಡಿದ್ದಾರೆ ಎಂದು ರಾಷ್ಟ್ರೀಯ ಅಪರಾಧ ದಾಖಲೆ ಬ್ಯೂರೋ ವರದಿ ತಿಳಿಸಿದೆ.

ಗುಡುಗು-ಮಿಂಚು ಬರಲಿದೆ ಎಂದು ಗೊತ್ತಾದಾಗ ನೀವು ಹೊಲದಲ್ಲಿದ್ದರೆ, ಹತ್ತಿರದಲ್ಲಿರುವ ಯಾವುದೇ ಕಟ್ಟಡದಲ್ಲಿ ಆಶ್ರಯ ಪಡೆಯಬೇಕು. ಬಯಲು ಪ್ರದೇಶದಲ್ಲಿದ್ದರೆ ತಕ್ಷಣವೇ ಇರುವುದರಲ್ಲಿ ತಗ್ಗು ಪ್ರದೇಶಕ್ಕೆ ಹೋಗಿ ಕುಳಿತುಕೊಳ್ಳಬೇಕು. ಮರಗಳಿದ್ದ ಪ್ರದೇಶದಲ್ಲಿ ನೀವು ಇದ್ದರೆ, ಅಲ್ಲಿಂದ ಬೇಗನೆ ಹೊರಬರುವುದು ಒಳ್ಳೆಯದು. ಯಾಕೆಂದರೆ ಸಿಡಿಲು ಮೋಡದಿಂದ ಭೂಮಿಗೆ ಹರಿಯಲು ಮರದಂತಹ ಹಸಿ, ಒದ್ದೆ ವಸ್ತುವನ್ನೇ ಆರಿಸಿಕೊಳ್ಳುತ್ತದೆ. ವಿದ್ಯುತ್ ಕಂಬ, ಎಲೆಕ್ಟ್ರಿಕ್ ಟವರ್, ಮೊಬೈಲ್ ಟವರ್, ಟ್ರಾನ್ಸ್‌ಫಾರ್ಮರ್ ಮುಂತಾದವುಗಳ ಹತ್ತಿರವೂ ಇರಬಾರದು. ಗುಡುಗು-ಸಿಡಿಲಿನ ಸಂದರ್ಭದಲ್ಲಿ ಫೋನ್ ಮಾಡಬೇಡಿ. ಅದನ್ನು ದೂರವಿರಿಸಿ. ಅದನ್ನು ಚಾರ್ಜ್ ಮಾಡುವ ಸಾಹಸವೂ ಬೇಡ.

> **ದಕ್ಷಿಣ ಒಳನಾಡಿನ ಭಾಗದ ಚಾಮರಾಜನಗರ, ಮಂಡ್ಯ, ರಾಮನಗರ ಬೆಂಗಳೂರು ಮತ್ತು ಕೋಲಾರದಲ್ಲಿ ಸಂಜೆ ಇಲ್ಲವೇ ರಾತ್ರಿ ಗುಡುಗು, ಸಿಡಿಲು, ಗಾಳಿ ಸಹಿತ ಮಳೆಯಾಗಲಿದೆ. ಹವಾಮಾನ ಬದಲಾಗಿರುವ ಹಿನ್ನಲೆಯಲ್ಲಿ ಕರಾವಳಿ ಪ್ರದೇಶಗಳಲ್ಲೂ ಮಳೆಯಾಗುವ ಸಾಧ್ಯತೆ ಇದೆ.**
>
> **- ಶ್ರೀನಿವಾಸ್ ರೆಡ್ಡಿ**
> ಕರ್ನಾಟಕ ರಾಜ್ಯನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ನಿರ್ದೇಶಕ

ರಾಜ್ಯದಲ್ಲಿ ಸಿಡಿಲಿಗೆ ಬಲಿಯಾದವರು

ವರ್ಷ	ಸತ್ತವರ ಸಂಖ್ಯೆ
2013	36
2014	8
2015	96
2016	67
2017	42
2018	77

ಸಾಂದರ್ಭಿಕ ಚಿತ್ರ

ರಕ್ಷಣೆಗೆ ಬಳಸಿ ಸಿಡಿಲು ಮೊಬೈಲ್ ಆ್ಯಪ್

ಸಿಡಿಲಿನಿಂದ ಪಾರಾಗಲು ಈಗಾಗಲೇ ರಾಜ್ಯ ಸರಕಾರ ಸಿಡಲು ಮೊಬೈಲ್ ಆ್ಯಪ್ ಬಿಡುಗಡೆ ಮಾಡಿದೆ. ರಾಜ್ಯದ 10-12 ಜಾಗದಲ್ಲಿ ಸಿಡಿಲು ಮುನ್ಸೂಚನೆ ಸೆನ್ಸರ್ ಅಳವಡಿಸಲಾಗಿದೆ. ಇದಕ್ಕಾಗಿ ಸ್ಮಾರ್ಟ್ ಫೋನ್ ಗಳಲ್ಲಿ ಈ ಆ್ಯಪ್ ಡೌನ್‌ಲೋಡ್ ಮಾಡಿಕೊಂಡು ನಮ್ಮ ಮೊಬೈಲ್ ಸಂಖ್ಯೆ ನಮೂದಿಸಬೇಕು. ನಂತರ ಬರುವ ಒನ್ ಟೈಂ ಪಾಸ್ ವರ್ಡ್ (ಒಟಿಪಿ) ಬಳಸಿ ಲಾಗ್ ಇನ್ ಆಗಬೇಕು. ಮುಂದೆ ಆ್ಯಪ್ ಸ್ವತಃ ಮೊಬೈಲ್ ಇರುವ ಸ್ಥಳಕ್ಕೆ ಅನುಗುಣವಾಗಿ ಎಚ್ಚರಿಕೆ ಸಂದೇಶ ನೀಡುತ್ತದೆ. ಮುಂಜಾಗ್ರತಾ ಕ್ರಮ, ಸಿಡಿಲು ಬಡಿದು ತೀವ್ರ ಅಸ್ವಸ್ಥರಾದವರಿಗೆ ಅನುಸರಿಸಬೇಕಾದ ವೈದ್ಯಕೀಯ ಕ್ರಮಗಳನ್ನೂ ಆ್ಯಪ್ ನಲ್ಲಿ ಅಳವಡಿಸಲಾಗಿದೆ. ಆ್ಯಪ್ ಕಾರ್ಯಾಚರಣೆ ಆರಂಭಿಸಿದ ಬಳಿಕ ಸೆನ್ಸರ್ ಸ್ಟೇಷನ್‌ನಿಂದ ಮಳೆ, ಸಿಡಿಲು-ಗುಡುಗು ಬಗ್ಗೆ ಮುನ್ಸೂಚನೆ ಬರುತ್ತದೆ. ಸಾಮಾನ್ಯವಾಗಿ 30ರಿಂದ 45 ನಿಮಿಷ ಮೊದಲೇ ಈ ಬಗ್ಗೆ ಮುನ್ಸೂಚನೆ ಬರುವುದರಿಂದ ಅವಘಡಗಳನ್ನು ತಪ್ಪಿಸಲು ಸಾಧ್ಯ.

ಕೊಪ್ಪಳಕ್ಕೆ ಮಾಲತಿ ನಾಯಕ್ ಭೇಟಿ

ವಿಶ್ವವಾಣಿ ಸುದ್ದಿಮನೆ ಕೊಪ್ಪಳ

ನಗರದಲ್ಲಿ ಹಕ್ಕಿಪಿಕ್ಕಿ ಸಮುದಾಯ, ಹರಿಣ ಶಿಕಾರಿ ಸಮುದಾಯದಲ್ಲಿರುವ ಮೂಢನಂಬಿಕೆಯ ಅಮಾನವೀಯ ಆಚರಣೆಗಳು ಬೆಳಕಿಗೆ ಬಂದಿರುವ ಹಿನ್ನೆಲೆಯಲ್ಲಿ ರಾಜ್ಯ ಮಹಿಳಾ ಆಯೋಗದ ಸದಸ್ಯೆ ಮಾಲತಿ ನಾಯಕ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಹಕ್ಕಿಪಿಕ್ಕಿ ಸಮುದಾಯ ಇರುವ ಸ್ಥಳಕ್ಕೆ ಜಿಲ್ಲಾ ಸ್ವಾಭಿಮಾನಿ ಮಹಿಳಾ ಸಂಚಲನ ಸಮಿತಿ ಮುಖಂಡರೊಂದಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಂಡ ಅವರು, ಮೂಢನಂಬಿಕೆಯ ಆಧಾರದ ಮೇಲೆ ಮಹಿಳೆಯರನ್ನು ನಡೆಸಿಕೊಳ್ಳುತ್ತಿರುವುದು ಸರಿಯಲ್ಲ, ಅವರಿಗೆ ಶಿಕ್ಷಣ, ವೈಜ್ಞಾನಿಕ ತಿಳಿವಳಿಕೆ ಇಲ್ಲದ್ದರಿಂದ ಇನ್ನೂ ಕೆಲ ಅನಿಷ್ಟ ಪದ್ಧತಿಗಳು ಆಚರಣೆಯಲ್ಲಿವೆ ಎಂದರು.

ಆಧುನಿಕ ಸಮಾಜದಲ್ಲಿ ಈ ರೀತಿಯ ಪರಿಸ್ಥಿತಿ ಇರುವುದು ನಾಗರಿಕ ಸಮಾಜ ತಲೆ ತಗ್ಗಿಸುವಂತಾಗಿದೆ. ಈ ಸಮುದಾಯದ ಜನರು ಬದಲಾಗಬೇಕು, ಎಲ್ಲರಂತೆ ಅವರು ಬದುಕಲು ಮೂಲಭೂತ ಅವಶ್ಯಕತೆಗಳನ್ನು ನೀಡುವುದು ಅಗತ್ಯ. ಡಿಸಿ, ಎಸ್‌ಪಿ ಅವರನ್ನು ಭೇಟಿ ಮಾಡಿ ಈ ಜನಾಂಗದವರಿಗೆ ಆಗುತ್ತಿರುವ ತೊಂದರೆಗಳನ್ನು ನಿವಾರಿಸಲು ಪ್ರಯತ್ನಿಸುವ ಭರವಸೆ ನೀಡಿದರು. ಕನ್ನಡ ಜಾನಪದ ಪರಿಷತ್ ರಾಜ್ಯ ಅಧ್ಯಕ್ಷ ಡಾ. ಎಸ್. ಬಾಲಾಜಿ ಇದ್ದರು.

ಬದುಕಲು ಅವಕಾಶ ಮಾಡಿಕೊಡಿ

ನಿವಾಸಿಗಳಾದ ನಿಂಗಮ್ಮ, ಯಲ್ಲಮ್ಮ, ಆನಂದಪ್ಪ ಮಾತನಾಡಿ, ಸಮಾಜ ತಮಗೆ ಬದುಕಲು ಅವಕಾಶ ಮಾಡಿಕೊಟ್ಟರೆ, ಭಿಕ್ಷೆ ಯಾಕೆ ಬೇಡುತ್ತೇವೆ, ಇಲ್ಲಿನ ಗಂಡಸರು ಬದುಕುವುದು ಕಷ್ಟವಾಗಿದೆ. ನಮ್ಮ ಹೆಂಡತಿ ಮಕ್ಕಳು ಭಿಕ್ಷೆ ಬೇಡಿ, ದುಡಿದು ತಂದು ಸಾಕುತ್ತಿದ್ದಾರೆ. ಇದನ್ನು ನೋಡಿ ಆತ್ಮಹತ್ಯೆ ಮಾಡಿಕೊಳ್ಳಬೇಕು ಅನಿಸುತ್ತದೆ ಎಂದು ತಮ್ಮ ಅಳಲು ತೋಡಿಕೊಂಡರು.

ಕೊಪ್ಪಳ ನಗರದ ಸಜ್ಜೆಹೊಲದಲ್ಲಿರುವ ಹಕ್ಕಿಪಿಕ್ಕಿ ಸಮುದಾಯದ ಮನೆಗಳಿಗೆ ರಾಜ್ಯ ಮಹಿಳಾ ಆಯೋಗದ ಸದಸ್ಯೆ ಮಾಲತಿ ನಾಯಕ್ ಭೇಟಿ ನೀಡಿ ಮಾಹಿತಿ ಪಡೆದರು.

ಕಥೆ ಸೃಷ್ಟಿಯಲ್ಲಿ ಎಚ್‌ಡಿಕೆ ನಿಸ್ಸೀಮರು

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಸಿಎಂ ಕುಮಾರಸ್ವಾಮಿ ಅವರು ಬಿಡುಗಡೆ ಮಾಡಿರುವ ಆಡಿಯೊದಲ್ಲಿ ಸುಳ್ಳು ಮತ್ತು ಕಟ್ಟುಕಥೆ ಎನ್ನುವುದನ್ನು ಅವರೇ ಸ್ಪಷ್ಟಪಡಿಸಿದ್ದಾರೆ. ಸ್ವತಃ ಬಿ. ಎಸ್. ಯಡಿಯೂರಪ್ಪ ಅವರು ಭೇಟಿಯಾಗಿರುವುದನ್ನು ಮಾತ್ರ ಒಪ್ಪಿಕೊಂಡಿದ್ದಾರೆ ಅಷ್ಟೇ ಎಂದು ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ತಿಳಿಸಿದ್ದಾರೆ.

ನಡು ರಾತ್ರಿ ಶರಣಗೌಡ ಅವರನ್ನು ಯಡಿ ಯೂರಪ್ಪ ಅವರ ಬಳಿ ಕಳಿಸುವ ಸಂಚು ರೂಪಿಸಿದವರೇ ಮುಖ್ಯಮಂತ್ರಿ. ರಾತ್ರಿ ಭೇಟಿ ಮಾಡುವ ಅವಶ್ಯಕತೆ ಏನಿತ್ತು ಎಂದು ಪ್ರಶ್ನಿಸುವ ಮೂಲಕ ತನ್ನದೇನೂ ಪಾತ್ರವಿಲ್ಲ ಎನ್ನುವ ಮಹಾನ್ ನಾಟಕ ಮಾಡಿರುವ ಮುಖ್ಯಮಂತ್ರಿಗಳು ಎಷ್ಟು ಸಾಚಾ ಎನ್ನುವುದು ಅನೇಕ ಪ್ರಕರಣಗಳಲ್ಲಿ ಸಾಬೀತಾಗಿದೆ ಎಂದು ಕಿಡಿಕಾರಿದ್ದಾರೆ.

ವಿದಾನ ಪರಿಷತ್ತಿಗೆ ನಾಮಕರಣ ಮಾಡಲು ವಿಜುಗೌಡ ಅವರಲ್ಲಿ 25ಕೋಟಿ ರು. ಕೇಳಿದ್ದ ಕುಮಾರಸ್ವಾಮಿ ಅವರ ಬಗ್ಗೆ ಕಾಂಗ್ರೆಸ್ ನಾಯಕರೇಕೆ ಮೌನವಾಗಿದ್ದಾರೆ? ಮುಖ್ಯಮಂತ್ರಿಗಳೂ ಕೂಡಾ ಈ ಬಗ್ಗೆ ಮಾತನಾಡಲು ಸಿದ್ಧರಿಲ್ಲ ಏಕೆ? ಜೆಡಿಎಸ್ ಪಕ್ಷದಲ್ಲಿ ಸೂಟ್‌ಕೇಸ್ ಇಲ್ಲದೇ ಯಾವುದೇ ಕೆಲಸವಾಗುವುದಿಲ್ಲ ಎಂದು ಪ್ರಜ್ವಲ್ ರೇವಣ್ಣ ಹೇಳಿರುವುದನ್ನು ಮುಖ್ಯಮಂತ್ರಿಗಳೇಕೆ ಗಂಭೀರವಾಗಿ ಪರಿಗಣಿಸಿಲ್ಲ? ಸಚಿವ ಪುಟ್ಟರಂಗ ಶೆಟ್ಟಿ ಅವರಿಗೆ ಸೇರಿದೆ ಎನ್ನಲಾದ 25ಲಕ್ಷ ರು.ಗಳು ವಿದಾನಸೌಧದ ಸಚಿವರ ಕೊಠಡಿಯಲ್ಲೇ ಪತ್ತೆಯಾದರೂ ಅದರ ಬಗ್ಗೆ ಈವರೆಗೆ ತನಿಖೆ ಏಕೆ ಪ್ರಗತಿ ಕಂಡಿಲ್ಲ? ಎಂದು ಪ್ರಶ್ನಿಸಿದ್ದಾರೆ.ಈ ಹಿಂದೆ ರಾಜ್ಯಸಭಾ ಸ್ಥಾನಕ್ಕೆ ಗೆಲ್ಲಿಸಲು ತಮ್ಮ ಪಕ್ಷದ ಪ್ರತಿ ಶಾಸಕರು ತಲಾ 1 ಕೋಟಿ ರು.ಗಳಿಗೆ ಬೇಡಿಕೆ ಇಟ್ಟಿದ್ದರೆಂದು ಸ್ವತಃ ಕುಮಾರಸ್ವಾಮಿ ಅವರು ಒಪ್ಪಿಕೊಂಡಿದ್ದಾರೆ. ಇವೆಲ್ಲವೂ ಜೆಡಿಎಸ್ ಪಕ್ಷದ ಹಣಕಾಸು ವ್ಯವಹಾರಗಳಿಗೆ ಕನ್ನಡಿ ಹಿಡಿದಿದೆ. ಶಾಸಕರ ಖರೀದಿ ನಡೆಯುತ್ತಿದೆ ಎಂದು ಬಿಜೆಪಿ ಬಗ್ಗೆ ದೂರುವ ಮುಖ್ಯಮಂತ್ರಿಗಳು ವಿದಾನಸೌಧದ ಕಚೇರಿಯ ಹೊರಗೆ ಪಂಚತಾರಾ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡುವ ಉದ್ದೇಶವೇನು? ಎಂದರು.

ಮೋಕ್ಷ ಸಾಧನೆ ಕ್ಷುಲ್ಲಕ ದೀಕ್ಷಾ ಮಹೋತ್ಸವ

ವಿಶ್ವವಾಣಿ ಸುದ್ದಿಮನೆ ಉಜಿರೆ

ಧರ್ಮಸ್ಥಳದಲ್ಲಿ ನಡೆಯುತ್ತಿರುವ ಭಗವಾನ್ ಬಾಹುಬಲಿ ಮಹಾಮಸ್ತಕಾಭಿಷೇಕದ ಸಂದರ್ಭದಲ್ಲಿ ಭಾನುವಾರ ರತ್ನಗಿರಿಯಲ್ಲಿ ಬಾಹುಬಲಿಯ ಪದ ತಲದಲ್ಲಿ ಧಾರ್ಮಿಕ ವಿಧಿ-ವಿಧಾನಗಳು ನಡೆದರೆ, ಇತ್ತ ಅಮೃತವರ್ಷಿಣಿ ಸಭಾ ಭವನದಲ್ಲಿ ಮೋಕ್ಷ ಸಾಧನೆಗಾಗಿ ಕ್ಷುಲ್ಲಕ ದೀಕ್ಷಾ ಮಹೋತ್ಸವ ಸಂಭ್ರಮ-ಸಡಗರದಿಂದ ನಡೆಯಿತು.

ಆಚಾರ್ಯ ಶ್ರೀ 108 ವರ್ಧಮಾನ ಸಾಗರ್‌ಜಿ ಮುನಿಮಹಾರಾಜರು, ಆಚಾರ್ಯ ಶ್ರೀ 108 ಪುಷ್ಪದಂತ ಸಾಗರ ಮುನಿ ಮಹಾರಾಜರು ಹಾಗೂ ಮುನಿ ಸಂಘದವರು ಮತ್ತು ಮಾತಾಜಿಯವರ ನೇತೃತ್ವದಲ್ಲಿ ಐದು ಮಂದಿಗೆ ಕ್ಷುಲ್ಲಕ ದೀಕ್ಷೆ ನೀಡುವ ಮಹೋತ್ಸವ ನಡೆಯಿತು.

ಮಧ್ಯಪ್ರದೇಶದ 24 ವರ್ಷದ ಸತೀಶ್ ಬೈಯ್ಯಾಜಿ, ಹೈದರಾಬಾದ್‌ನ ಪೂರನ್ ಬೈಯ್ಯಾಜಿ, ಉತ್ತರಪ್ರದೇಶದ ಶ್ರೀ ಪ್ರಭು ಬೈಯ್ಯಾಜಿ, ಸಂಯಮ ಮತ್ತು ಸವಿತಾ ಕ್ಷುಲ್ಲಕ ದೀಕ್ಷೆ ಪಡೆದರು. ಬೆಳಗ್ಗೆ ಭಗವಾನ್ ಚಂದ್ರನಾಥ ಸ್ವಾಮಿ ಬಸದಿಯಲ್ಲಿ ವಿಶೇಷ ಪೂಜೆ ಬಳಿಕ ದೀಕ್ಷೆ ಪಡೆಯುವ ಐದು ಮಂದಿಯನ್ನು ಹಾಗೂ ಮುನಿ ಸಂಘದವರನ್ನು ಭವ್ಯ ಮೆರವಣಿಗೆಯಲ್ಲಿ ಅಮೃತವರ್ಷಿಣಿ ಸಭಾ ಭವನಕ್ಕೆ ಕರೆ ತರಲಾಯಿತು.

ದೀಕ್ಷೆ ಪಡೆಯುವವರನ್ನು ಉತ್ತಮ ವಸ್ತ್ರಾಭರಣ ತೊಡಿಸಿ ಸಿಂಗರಿಸಲಾಗಿತ್ತು. ಧರ್ಮಸ್ಥಳದ ಅನಿತಾ ಸುರೇಂದ್ರ ಕುಮಾರ್ ಅಕ್ಕಿಯಿಂದ ಸ್ವಸ್ತಿಕವನ್ನು ರಚಿಸಿದರು. ದೀಕ್ಷಾರ್ಥಿಗಳನ್ನು ಮುನಿಗಳು ಯಾಕೆ ದೀಕ್ಷೆ ಪಡೆಯುವುದು ಎಂದು ಪ್ರಶ್ನಿಸಿದರು.

ಎಲ್ಲರೂ ಆತ್ಮಕಲ್ಯಾಣಕ್ಕಾಗಿ ಹಾಗೂ ಮೋಕ್ಷಪ್ರಾಪ್ತಿಗಾಗಿ ದೀಕ್ಷೆ ಪಡೆಯುವುದಾಗಿ ತಮ್ಮ ಅಭಿಪ್ರಾಯ ತಿಳಿಸಿದರು. ಅವರ ಮಾತಾ-ಪಿತರಲ್ಲಿಯೂ ಒಪ್ಪಿಗೆ ಪಡೆದ ಬಳಿಕ ದೀಕ್ಷಾ ಕಾರ್ಯಕ್ರಮ ನಡೆಯಿತು.

ದೀಕ್ಷಾರ್ಥಿಗಳ ಎಲ್ಲ ಆಭರಣಗಳನ್ನು ಒಂದೊಂದಾಗಿ ಕಳಚಲಾಯಿತು. ಅಂಗಿ ಮತ್ತು ಬಟ್ಟೆಯನ್ನೂ ಕಳಚಿ ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ಕೇಶಲೋಚನ ಮಾಡಲಾಯಿತು.

ಸಂಯಮಾ ಮತ್ತು ಸವಿತಾಗೆ ಬಿಳಿ ಸೀರೆ ಉಡಿಸಿದರು. ಪಂಚ ನಮಸ್ಕಾರ ಮಂತ್ರ ಪಠಣ ಹಾಗೂ ಶ್ಲೋಕಗಳ ಪಠಣದೊಂದಿಗೆ ಮುನಿ ಸಂಘದವರು ಕ್ಷುಲ್ಲಕ ದೀಕ್ಷೆ ನೀಡಿದರು. ಐದು ಮಂದಿಗೂ ಪಿಂಛಿ ಮತ್ತು ಕಮಂಡಲ ಹಾಗೂ ಸ್ವಾಧ್ಯಾಯಕ್ಕಾಗಿ ಶಾಸ್ತ್ರ ಗ್ರಂಥಗಳನ್ನು ನೀಡಲಾಯಿತು.

ನಾಮಕರಣ: ಸತೀಶ್ ಬೈಯ್ಯಾಜಿ ಅವರನ್ನು ಪರಮಸಾಗರ್ ಮಹಾರಾಜ್, ಪೂರನ್ ಬೈಯ್ಯಾಜಿ ಅವರನ್ನು ಪರಮಾತ್ಮ ಸಾಗರ್ ಎಂದು, ಶ್ರೀಪ್ರಭು ಬೈಯ್ಯಾಜಿ ಅವರನ್ನು ಪ್ರಭಾಕರ್ ಸಾಗರ್ ಮಹಾರಾಜ್ ಎಂದು ಸಂಯಮಾರನ್ನು ಅಮರಜ್ಯೋತಿ ಮಾತಾಜಿ ಎಂದು ಹಾಗೂ ಸವಿತಾರನ್ನು ಅಮೃತಜ್ಯೋತಿ ಮಾತಾಜಿ ಎಂದು ಆಚಾರ್ಯ ಪುಷ್ಪದಂತ ಸಾಗರ ಮುನಿಮಹಾರಜರು ನಾಮಕರಣ ಮಾಡಿದರು.

ದೀಕ್ಷೆ ಪಡೆಯುವವರನ್ನು ಹಾಗೂ ಮುನಿ ಸಂಘದವರನ್ನು ಭವ್ಯ ಮೆರವಣಿಗೆಯಲ್ಲಿ ಅಮೃತ ವರ್ಷಿಣಿ ಸಭಾ ಭವನಕ್ಕೆ ಕರೆ ತರಲಾಯಿತು.

> **ದೀಕ್ಷೆಯಿಂದ ಆತ್ಮಕಲ್ಯಾಣ, ಮೋಕ್ಷ ಪ್ರಾಪ್ತಿ: ಸುಖ-ಭೋಗಗಳನ್ನು ತ್ಯಾಗ ಮಾಡಿ ವೈರಾಗ್ಯ ಭಾವನೆಯಿಂದ ಯೋಗ ಸಾಧನೆ ಮಾಡಿದರೆ ಮೋಕ್ಷ ಪ್ರಾಪ್ತಿಯಾಗುತ್ತದೆ. ಆತ್ಮನೇ ಪರಮಾತ್ಮನಾಗಬಲ್ಲ.**
>
> **- 108 ವರ್ಧಮಾನ ಸಾಗರ ಮುನಿಮಹಾರಾಜರು** ಆಚಾರ್ಯ ಶ್ರೀ

ಬಿಎಸ್‌ವೈ ರಾಜೀನಾಮೆ ನೀಡಲಿ

ಹೊಸನಗರ: ಸಮ್ಮಿಶ್ರ ಸರಕಾರವನ್ನು ಉರುಳಿಸಿ ತಾವೇ ಮುಖ್ಯಮಂತ್ರಿಯಾಗಬೇಕೆಂದು ಹಗಲುಗನಸು ಕಾಣುತ್ತಿರುವ ವಿರೋಧ ಪಕ್ಷದ ನಾಯಕ ಬಿ.ಎಸ್.ಯಡಿಯೂರಪ್ಪ ಆಡಿಯೊ ಹಗರಣವನ್ನು ನಾನೇ ಮಾತನಾಡಿದ್ದು ಎಂದು ಒಪ್ಪಿಕೊಂಡಿದ್ದು, ಇದರಿಂದ ರಾಜ್ಯದ ಮಾರ್ಯದೆ ತೆಗೆದಿದ್ದಾರೆ. ಆದ್ದರಿಂದ ತಾವೇ ಹೇಳಿದ ಹಾಗೆ ಆಡಿಯೊ ಆರೋಪ ಸತ್ಯವಾದರೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ ಎಂದು ಹೇಳಿರುವುದರಿಂದ ವಿಧಾನಸಭಾ ಸದಸ್ಯತ್ವಕ್ಕೆ ಹಾಗೂ ವಿಧಾನ ಸಭೆಯ ವಿರೋಧ ಪಕ್ಷದ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಮಾಜಿ ಶಾಸಕ ಬೇಳೂರು ಗೋಪಾಲಕೃಷ್ಣರ ಒತ್ತಾಯಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಕರ್ನಾಟಕದಲ್ಲಿ ಎಂಟು ತಿಂಗಳಿನಿಂದ ಸಮ್ಮಿಶ್ರ ಸರಕಾರ ಉತ್ತಮವಾದ ಆಡಳಿತ ನಡೆಸುತ್ತಿದೆ. ಉತ್ತಮ ಬಜೆಟ್ ರಾಜ್ಯಕ್ಕೆ ನೀಡಿದೆ.

ಆದರೆ ವಿರೋಧ ಪಕ್ಷದಲ್ಲಿರುವ ಬಿಜೆಪಿಯವರು ಶತಯಗತಾಯ ಈ ಸರಕಾರ ಉರುಳಿಸಬೇಕೆಂದು ಪಣ ತೊಟ್ಟಿದೆ. ಅದರಲ್ಲೂ ಮಾಜಿ ಮುಖ್ಯಮಂತ್ರಿ ಬಿಎಸ್‌ವೈ ಅಧಿಕಾರದ ಆಸೆಯಿಂದ ಮುರ್ಖತನದ ರಾಜಕೀಯ ಮಾಡುತ್ತಿದ್ದಾರೆ.

ಅಧಿಕಾರದ ಆಸೆಗಾಗಿ ಎಂಥ ನೀಚ ಕೆಲಸವನ್ನಾದರೂ ಮಾಡಲು ಸಿದ್ಧವಿದ್ದು, ಇವರನ್ನು ನಂಬಿದವರಿಗೆ ಎಂಥಹ ಸಂದರ್ಭದಲ್ಲಿಯಾದರೂ ಕುತ್ತಿಗೆ ಕೊಯ್ಯುತ್ತಾರೆ ಎಂದರು

ರು. 2,608 ಕೋಟಿ ವೆಚ್ಚದ ಕಾಮಗಾರಿಗೆ ಪ್ರಧಾನಿ ಚಾಲನೆ

ಹುಬ್ಬಳ್ಳಿ: ಹುಬ್ಬಳ್ಳಿಗೆ ಭಾನುವಾರ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ 2,608 ರು. ವೆಚ್ಚದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಶಂಕು ಸ್ಥಾಪನೆ ನೆರವೇರಿಸಿದರು.

ಧಾರವಾಡಕ್ಕೆ 2016ರಲ್ಲಿ ಐಐಟಿ ಮಂಜೂರಿ ಮಾಡಲಾಗಿತ್ತು. ಆದರೆ ಐಐಟಿಗೆ ಸ್ವಂತ ಕಟ್ಟಡ ನಿರ್ಮಾಣವಾಗಿರಲಿಲ್ಲ. ಐಐಟಿ 1ನೇ ಹಂತದ ಯೋಜನೆಯಲ್ಲಿ, ಇದೀಗ 457 ಎಕರೆ ಪ್ರದೇಶದಲ್ಲಿ 1063 ಕೋಟಿ ರು. ವೆಚ್ಚದಲ್ಲಿ ಕಟ್ಟಡ ನಿರ್ಮಾಣ ಹಾಗೂ ತಂತ್ರಜ್ಞಾನ ಸಲಕರಣೆ ಒದಗಿಸುವ ಯೋಜನೆಗೆ ಪ್ರಧಾನಿ ಚಾಲನೆ ನೀಡಿದರು.

ಪ್ರಧಾನ ಮಂತ್ರಿ ಆವಾಸ ಯೋಜನೆಯಡಿಯಲ್ಲಿ 77 ಕೋಟಿ ರು. ವೆಚ್ಚದಲ್ಲಿ ಧಾರವಾಡ ಸೋಮೇಶ್ವರ ಹಿಂಭಾಗದ ಸಿದ್ದೇಶ್ವರ ನಗರದಲ್ಲಿ ಒಟ್ಟು 1072 ಸುಸಜ್ಜಿತ ಮನೆಗಳು ನಿರ್ಮಾಣವಾಗಿದ್ದು, ಇದಕ್ಕೆ ಪ್ರಧಾನಿ ಚಾಲನೆ ನೀಡಿದರು. 205 ಕೋಟಿ ರು. ವೆಚ್ಚದಲ್ಲಿ ಹುಬ್ಬಳ್ಳಿ-ಧಾರವಾಡ ನಗರದ ಮನೆ ಮನೆಗೆ ಕೊಳವೆ ಮೂಲಕ ಗ್ಯಾಸ್ ವಿತರಣಾ ಯೋಜನೆ ಹಾಗೂ ವಾಹನಗಳಿಗೆ ಸಿಎನ್‌ಜಿ ವಿತರಣಾ ಕೇಂದ್ರಗಳನ್ನು ನಿರ್ಮಿಸಲಾಗಿದೆ. ಈ ಯೋಜನೆಯಿಂದ 25 ಸಾವಿರ ಮನೆಗಳಿಗೆ ಕೊಳವೆ ಮೂಲಕ ಗ್ಯಾಸ್ ಸಂಪರ್ಕ ಸಿಗಲಿದ್ದು, ಈ ಯೋಜನೆಯನ್ನೂ ಪ್ರಧಾನಿ ಲೋಕಾರ್ಪಣೆಗೊಳಿಸಿದರು. 222 ಕೋಟಿ ರು. ವೆಚ್ಚದಲ್ಲಿ 18 ಕಿ.ಮೀ. ಅಂತರದ ಚಿಕ್ಕಜಾಜೂರು-ಮಾಯಕೊಂಡ ಜೋಡಿ ರೈಲು ಮಾರ್ಗ ರಚಿಸಲಾಗಿದೆ. 1041 ಕೋಟಿ ವೆಚ್ಚದಲ್ಲಿ 146 ಕಿ.ಮೀ. ಅಂತರದ ಹುಬ್ಬಳ್ಳಿ-ಚಿಕ್ಕಜಾಜೂರು ಮಾರ್ಗ ನಿರ್ಮಾಣವಾಗಿದ್ದು, ಈ ಎರಡೂ ಯೋಜನೆಗಳಿಗೆ ಪ್ರಧಾನಿ ಚಾಲನೆ ನೀಡಿದರು.

ಸಿದ್ಧಗಂಗಾ ಶ್ರೀ ಶಿವಕುಮಾರ ಸ್ವಾಮೀಜಿ ಅವರಿಗೆ ಭಾರತ ರತ್ನ ಪ್ರಶಸ್ತಿ ಮತ್ತು ಸಿದ್ಧಗಂಗಾ ಮಠದ ಮಾರ್ಗವಾಗಿ ರೈಲ್ವೇ ಬ್ರಿಡ್ಜ್ ನಿರ್ಮಾಣಕ್ಕೆ ಒತ್ತಾಯಿಸಿ ಕನ್ನಡ ಕಾರ್ಯಕರ್ತ ವಾಟಾಳ್ ನಾಗರಾಜ್ ಮತ್ತು ಇವರ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಗುತ್ತಿಗೆ ಆಧಾರದ ಮೇಲೆ ನಡೆಯುತ್ತಿದೆ ಸರಕಾರ!

ಬಾಲಕೃಷ್ಣ ಎನ್. ಬೆಂಗಳೂರು

ಸರಕಾರದಲ್ಲಿ ದುಡಿಯುತ್ತಿರುವ ಶೇ.60 ರಷ್ಟು ಸಿಬ್ಬಂದಿ ಗುತ್ತಿಗೆ ಆದಾರದಲ್ಲಿ ನೇಮಕವಾದವರು. ಗುತ್ತಿಗೆ ಮೇಲೆ ದುಡಿಯುತ್ತಿರುವ ನೌಕರರಿಗೆ ಸೇವಾ ಭದ್ರತೆಯೂ ಇಲ್ಲ, ಸಮಾನ ಕೆಲಸಕ್ಕೆ ಸಮಾನ ವೇತನವೂ ಇಲ್ಲವಾಗಿದೆ. ಸರಕಾರ ರಚನೆಯಾಗಿ ಎಂಟು ತಿಂಗಳು ಕಳೆದರೂ ಈವರೆಗೂ ಇಲಾಖೆಗಳಲ್ಲಿ ಖಾಲಿ ಸ್ಥಾನಗಳನ್ನು ತುಂಬಿಲ್ಲ. ಬರೀ ಗುತ್ತಿಗೆ ನೌಕರರನ್ನು ನೇಮಕ ಮಾಡಲಾಗುತ್ತಿದೆ.

ಸರಕಾರದ ಕೆಲವೊಂದು ಯೋಜನೆಗಳ ಕುರಿತು ಅದರ ಸಮೀಕ್ಷೆ ಹಾಗೂ ಯಶಸ್ವಿಗಾಗಿ ಸಾಂಪ್ರದಾಯಿಕವಾಗಿ ಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಯನ್ನು ನೇಮಕ ಮಾಡಿಕೊಂಡು ಹೆಚ್ಚು ಸಮಯ ದುಡಿಸಿಕೊಳ್ಳಲಾಗುತ್ತಿದೆ. ಗುತ್ತಿಗೆ ನೌಕರರಿಗೆ ಸೇವಾ ಭದ್ರತೆ ಹಾಗೂ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂದು ಸುಪ್ರೀಂ ಕೋರ್ಟ್ 2016ರ ಅಕ್ಟೋಬರ್‌ನಲ್ಲೇ ಆದೇಶ ನೀಡಿದೆ. ಆದರೆ, ಈ ಆದೇಶ ಪಾಲನೆಗೆ ಕರ್ನಾಟಕ ಸೇರಿದಂತೆ ಬಹುತೇಕ ರಾಜ್ಯಗಳು ಹಿಂದೇಟು ಹಾಕುತ್ತಿವೆ.

ವಿಧಾನಸೌಧಕ್ಕೆ ಮಾತ್ರ ಖಾಯಂ ಹುದ್ದೆ ಸೀಮಿತವಾಗಿದೆ. ಕೆಲ ಇಲಾಖೆಗಳಲ್ಲಿ ಯಾವುದೇ ನೇಮಕಾತಿ ಆದೇಶಗಳನ್ನು ಹೊರಡಿಸದೆ ನೇರ ನೇಮಕ ನಡೆಯುತ್ತಿದೆ. ಈ ಕುರಿತು ಎಚ್ಚೆತ್ತುಕೊಂಡಿರುವ ಆರ್ಥಿಕ ಇಲಾಖೆ ಸೂಕ್ತ ಕ್ರಮ ಕೈಗೊಂಡಿದೆ. ಆದರೂ ಯಾವುದೇ ಪ್ರಯೋಜವಾಗುತ್ತಿಲ್ಲ. ಸರಕಾರದ ಕೆಲಸಗಳು ಬೇರೆ ಬೇರೆ ಇಲಾಖೆಗಳಲ್ಲಿ ನಕಲಾಗುತ್ತಿದ್ದು, ಆಡಳಿತದಲ್ಲಿ ಪಾರದರ್ಶಕತೆ ಇಲ್ಲವಾಗಿದೆ. ಸರಕಾರವು ಎಷ್ಟು ಗುತ್ತಿಗೆ ನೌಕರರನ್ನು ನೇಮಕ ಮಾಡಿಕೊಂಡಿದೆ ಎಂಬುದರ ಬಗ್ಗೆಯೂ ಮಾಹಿತಿ ಪಡೆದಿಲ್ಲ.

ಜವಾನ ಹುದ್ದೆಯಿಂದ ಹಿಡಿದು ಉನ್ನತ ಹುದ್ದೆಗಳವರೆಗೂ ಇತ್ತೀಚಿಗೆ ನಡೆಸಲಾದ ನೇಮಕಾತಿಗಳಲ್ಲಿ ಹೆಚ್ಚು ಗುತ್ತಿಗೆ ನೌಕರರಿದ್ದಾರೆ. ಕಾಯಂ ನೇಮಕಾತಿ ಮಾಡಿದರೆ ಹೆಚ್ಚು ಸಂಬಳ ನೀಡಬೇಕಾಗುತ್ತದೆ ಎಂದು ತಿಳಿದಿರುವ ಸರಕಾರ ಗುತ್ತಿಗೆ ಆಧಾರದ ಮೇಲೆ ನಡೆಸಲು ತೀರ್ಮಾನಿಸಿದೆ. ಸದ್ಯ ಈಗ ದುಡಿಯುತ್ತಿರುವ ನೌಕರರ ಪಾಡಂತೂ ಕೇಳುವವರಿಲ್ಲ. ಕಾಯಂ ನೌಕರರಿಗೆ ಸರಕಾರ ನೀಡುವ ಸೌಲಭ್ಯಗಳನ್ನು ಗುತ್ತಿಗೆ ನೌಕರರಿಗೆ ನೀಡಿಲ್ಲ. ಕಾಯಂ ನೌಕರರಿಗೆ ಹೆಚ್ಚು ಸಂಬಳ ನೀಡಲಾಗುತ್ತದೆ ಆದರೆ ಗುತ್ತಿಗೆ ನೌಕರರಿಗೆ ಕಡಿಮೆ. ಇಬ್ಬರೂ ಒಂದೇ ಕೆಲಸ ಮಾಡುತಾರೆ. ಒಂದೇ ವಿದ್ಯಾಭ್ಯಾಸ ಮಾಡಿರುತ್ತಾರೆ. ಕಾಯಂ ನೌಕರರಿಗೆ ಕೆಲ ತಿಂಗಳಿಗೊಮ್ಮೆ ಸಂಬಳ ಕೊಡುವ ಪದ್ಧತಿ ಇದೆ. ಸರಕಾರ ಹೊಸ ಯೋಜನೆಗಳನ್ನು ಘೋಷಿಸಿದೆ. ಯೋಜನೆಗಳನ್ನು ಅನುಷ್ಠಾನಗೊಳಿಸಲು ಗುತ್ತಿಗೆ ನೌಕರರನ್ನು ನೇಮಕಾತಿ ಮಾಡಿಕೊಳ್ಳಲಿದೆ. ಸುಮಾರು ವರ್ಷಗಳಾದ ಮೇಲೆ ಆ ಯೋಜನೆಯನ್ನು ಯಾವುದೋ ಒಂದು ಕಾರಣ ಹೇಳಿ ರದ್ದು ಮಾಡುತ್ತದೆ. ಆ ಯೋಜನೆಯಲ್ಲಿ ಕೆಲಸ ಮಾಡುತ್ತಿರುವ ಗುತ್ತಿಗೆ ನೌಕರರ ಗತಿ ಏನಾಗಬೇಕೆಂಬುದರ ಬಗ್ಗೆ ಸರಕಾರಕ್ಕೆ ಅರಿವಿಲ್ಲ ವಾಗಿದೆ. ಕಳೆದ ಎರಡು ತಿಂಗಳ ಹಿಂದೆ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕ ಕುರಿತು ಸರಕಾರ ಸಭೆ ನಡೆಸಿತ್ತು. ಈವರೆಗೂ ನೇಮಕಾತಿ ಪ್ರಕ್ರಿಯೆ ನಡೆಸಿಲ್ಲ.

> **ಎಲ್ಲ ಇಲಾಖೆಗಳಂತೆ ಆರೋಗ್ಯ ಇಲಾಖೆಯಲ್ಲಿ ಹೆಚ್ಚು ಗುತ್ತಿಗೆ ನೌಕರರಿದ್ದಾರೆ. ಸುಮಾರು 10-15 ವರ್ಷದಿಂದ ದುಡಿಯುತ್ತಿದ್ದಾರೆ. ಈವರೆಗೂ ಈ ನೌಕರರನ್ನು ಕಾಯಂ ಮಾಡಿಲ್ಲ. ಸರಕಾರಕ್ಕೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಸೂಕ್ತ ಸಮಯಕ್ಕೆ ಸಂಬಳ ನೀಡದೆ ಮೋಸ ಮಾಡಲಾಗುತ್ತಿದೆ.**
>
> **- ವಿಶ್ವನಾಥ್** ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆಯ ಗುತ್ತಿಗೆ ನೌಕರರ ಸಂಘದ ಅಧ್ಯಕ್ಷ

ಶ್ರೀನಿವಾಸಮೂರ್ತಿ ನೇತೃತ್ವದ ವರದಿ ನನೆಗುದಿಗೆ

ಗುತ್ತಿಗೆ ಹಾಗೂ ಹೊರಗುತ್ತಿಗೆಗೆ ಬ್ರೆಕ್, ಇಲಾಖೆಗಳ ಪುನಾರಚನೆಗೆ ನಿವೃತ್ತ ಐಎಎಸ್ ಅಧಿಕಾರಿ ಎಂ.ಆರ್.ಶ್ರೀನಿವಾಸಮೂರ್ತಿ ನೇತೃತ್ವದ ಆರನೇ ವೇತನ ಆಯೋಗ ವರದಿ ನೀಡಲು ಸಿದ್ಧತೆ ನಡೆಸಿತ್ತು. ಆಡಳಿತದಲ್ಲಿ ಚುರುಕು ಮೂಡಿಸಲು ಆಡಳಿತ ಸುಧಾರಣೆಗೂ ಪರಿಶೀಲನೆ ನಡೆಸಿದೆ. ಬೇರೆ ಬೇರೆ ರಾಜ್ಯಗಳಲ್ಲಿರುವ ಪದ್ಧತಿ ಬಗ್ಗೆ ವೇತನ ಆಯೋಗ ಮಾಹಿತಿ ಸಂಗ್ರಹ ಮಾಡಿದೆ. ರಾಜ್ಯದಲ್ಲಿ 2.80 ಲಕ್ಷ ಹುದ್ದೆಗಳು ಖಾಲಿಯಿದೆ.

ಆರೋಗ್ಯ ಇಲಾಖೆಯಲ್ಲಿ ಹೆಚ್ಚು!

ಆರೋಗ್ಯ ಇಲಾಖೆಯಲ್ಲಿ ವೈದ್ಯರಿಂದ, ಜವಾನ ಹುದ್ದೆಯವರೆಗೂ ಕಾಯಂ ನೌಕರರಿಗಿಂತ ಗುತ್ತಿಗೆ ಸಿಬ್ಬಂದಿಯೇ ಹೆಚ್ಚಾಗಿದ್ದಾರೆ. ಈ ಇಲಾಖೆಯಲ್ಲಿ ರಾಜ್ಯಾದ್ಯಂತ 30,500 ಕ್ಕೂ ಹೆಚ್ಚು ಗುತ್ತಿಗೆ ನೌಕರರಿದ್ದಾರೆ. ಕೆಲವೊಂದು ಜಿಲ್ಲೆಗಳಲ್ಲಿ ಈ ನೌಕರರಿಗೆ ಸರಿಯಾದ ಸಮಯಕ್ಕೆ ಸಂಬಳವೇ ನೀಡಿಲ್ಲ. ಇವರ ಬೇಡಿಕೆಗಳನ್ನು ಈಡೇರಿಸುವಲ್ಲಿ ಈ ಇಲಾಖೆ ಸಂಪೂರ್ಣವಾಗಿ ವಿಫಲವಾಗಿದೆ. ಇಲಾಖೆ ಇತ್ತೀಚೆಗೆ ಕೈಗೊಂಡಿರುವ ಆರೋಗ್ಯ ಮಿಷನ್ ಯೋಜನೆ ಅಡಿ ನೇಮಕ ಮಾಡಿಕೊಂಡಿರುವ ಸಿಬ್ಬಂದಿಯೆಲ್ಲ ಹೊರಗುತ್ತಿಗೆಯವರೇ. ಇಲಾಖೆಯಡಿ ಬರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ ಕಾರ್ಯಕರ್ತೆಯರನ್ನು ಈವರೆಗೂ ಕಾಯಂ ಮಾಡಿಲ್ಲ. ತೀರಾ ಕಡಿಮೆ ಸಂಬಳಕ್ಕೆ ದುಡಿಸಿಕೊಳ್ಳುತ್ತಿದೆ.

ಶಿಕಾರಿಪುರದಲ್ಲಿ ಬಿಎಸ್‌ವೈ ವಿರುದ್ಧ ಪ್ರತಿಭಟನೆ

ಶಿಕಾರಿಪುರ: ಪಟ್ಟಣ ಬಸ್ ನಿಲ್ದಾಣದಲ್ಲಿ ವಿಪಕ್ಷ ನಾಯಕ ಬಿ.ಎಸ್ ಯಡಿಯೂರಪ್ಪನವರ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಪತ್ರಿಭಟನೆ ನಡೆಸಿ ಸಮ್ಮಿಶ್ರ ಸರಕಾರ ಉರಿಳಿಸಲು ಬಿ.ಎಸ್.ವೈ ಷಡ್ಯಂತ್ರ ನಡೆಸುತ್ತಿದ್ದಾರೆ ಎಂದು ಆರೋಪಿ ಬಿಜೆಪಿಯ ವಿರುದ್ಧ ಘೋಷಣೆ ಕೂಗಿ ಮಾನವ ಸರಪಳಿ ನಿರ್ಮಿಸಿದರು. ತಾಲೂಕ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋಣಿ ಮಾಲತೇಶ ಮಾತನಾಡಿ, ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಸಮ್ಮಿಶ್ರ ಸರಕಾರವನ್ನು ಬೀಳಿಸುವ ಹುನ್ನಾರ ಮಾಡುತ್ತಿರುವ ರಾಜ್ಯ ಬಿಜೆಪಿ ನಾಯಕ ಬಿಎಸ್‌ವೈ ಸಂವಿಧಾನ ವಿರೋಧಿ ಕೃತ್ಯ ನಡೆಸಿ ಸಂವಿಧಾನಕ್ಕೆ ಅಪಚಾರ ಮಾಡುತ್ತಿದ್ದಾರೆ. ಇವರಿಗೆ ಪ್ರಜಾಪ್ರಭುತ್ವದ ಮೇಲೆ, ಸಂವಿಧಾನದ ಮೇಲೆ ಯಾವುದೇ ರೀತಿಯ ಗೌರವವಿಲ್ಲ. ಆದ್ದರಿಂದ ಕೂಡಲೇ ಅವರು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು ಎಂದರು.ಜಿಪಂ ಸದಸ್ಯ ನರಸಿಂಗ್ ನಾಯ್ಕ್, ಯುವ ಕಾಂಗ್ರೆಸ್ ಅಧ್ಯಕ್ಷ ಉಳ್ಳಿ ದರ್ಶನ, ಪುರಸಭಾ ಸದಸ್ಯ ಮಹೇಶ್ ಹುಲ್ಮಾರ್ ಇದ್ದರು.